**File No.DPARAR/104/AAR/2019-DPARAR_TRG-DPAR AR SEC**

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಯ ಸಂಖ್ಯೆಗಳನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಇವರ ಪತ್ರ ಸಂಖ್ಯೆ:ಜಿಎಃ 261/2019-20, ದಿನಾಂಕ:16/09/2019.

2) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 105 ಇಆಸು 2011, ದಿನಾಂಕ:20/11/2012

3) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಸಿಆಸುಇ 105 ಇಆಸು 2011, ದಿನಾಂಕ:15/04/2013

******

ಪ್ರಸ್ತಾವನೆ:-

ಮೇಲೆ ಓದಲಾದ ಕ್ರ.ಸಂ. (1)ರಲ್ಲಿರುವ ಪತ್ರದಲ್ಲಿ ರಾಜ್ಯಾದ್ಯಂತ ಸುಮಾರು 5.25 ಲಕ್ಷ ಸರ್ಕಾರಿ ನೌಕರರು ಸೇವೆ ಸಲ್ಲಿಸುತ್ತಿದ್ದು, ಪ್ರತಿವರ್ಷ ಕೇವಲ 10 ಮಂದಿಗೆ ಮಾತ್ರ 'ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿ' ನೀಡುತ್ತಿರುವುದರಿಂದ ಹಲವು ಪ್ರತಿಭಾನ್ವಿತ, ಅತ್ಯುತ್ತಮ ಹಾಗೂ ವಿಶಿಷ್ಟ ಸೇವೆ ಸಲ್ಲಿಸುತ್ತಿರುವ ನೌಕರರು ಪ್ರಶಸ್ತಿಗಳಿಂದ ವಂಚಿತರಾಗುತ್ತಿರುವುದರಿಂದ, ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು 10 ರಿಂದ ಕನಿಷ್ಠ 30ಕ್ಕೆ ಹೆಚ್ಚಳ ಮಾಡಬೇಕೆಂದು ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2)ರಲ್ಲಿರುವ ಆದೇಶದಲ್ಲಿ ಅತ್ಯುನ್ನತ ಸೇವೆಗೈದ / ಸಾಧನೆಗೈದ, ವಿನೂತನ ರೀತಿ ಕಾರ್ಯ ಪದ್ಧತಿಯನ್ನು ರೂಪಿಸಿಕೊಂಡಿರುವ ರಾಜ್ಯ ಸರ್ಕಾರಿ ಅಧಿಕಾರಿ / ನೌಕರರಿಗೆ ರಾಜ್ಯ ಸರ್ಕಾರದ ವತಿಯಿಂದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ನೀಡಲು ಆರಂಭಿಸಲಾಗಿದೆ. ಸದರಿ ಪ್ರಶಸ್ತಿಯು ಜಿಲ್ಲಾವಾರು, ಇಲಾಖಾವಾರು ಮತ್ತು ರಾಜ್ಯ ಪ್ರಶಸ್ತಿಯೆಂದು ಮೂರು ಹಂತದಲ್ಲಿ ನೀಡಲು ತೀರ್ಮಾನಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಪ್ರತಿ ಜಿಲ್ಲೆಗೆ 6 ಪ್ರಶಸ್ತಿಗಳು, ಇಲಾಖಾವಾರು 30 ಪ್ರಶಸ್ತಿಗಳು, 3 ರಾಜ್ಯ ಪ್ರಶಸ್ತಿಗಳನ್ನು ನೀಡಲು ನಿರ್ಧರಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ.(3)ರಲ್ಲಿರುವ ತಿದ್ದುಪಡಿ ಆದೇಶದಲ್ಲಿ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯ ಸಂಖ್ಯೆಯನ್ನು 3 ರಿಂದ 10ಕ್ಕೆ ಏರಿಸಲಾಗಿದೆ.

ಈ ಮೇಲಿನ ಪ್ರಸ್ತಾವನೆಯಲ್ಲಿರುವ ಅಂಶಗಳನ್ನು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 104 ಇಆಸು 2019,**

**ಬೆಂಗಳೂರು, ದಿನಾಂಕ:07-12-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಅತ್ಯುನ್ನತ ಸೇವೆಗೈದ / ಸಾಧನೆಗೈದ, ವಿನೂತನ ರೀತಿ ಕಾರ್ಯಪದ್ಧತಿಯನ್ನು ರೂಪಿಸಿಕೊಂಡಿರುವ ರಾಜ್ಯ ಸರ್ಕಾರಿ ಅಧಿಕಾರಿ/ನೌಕರರಿಗೆ ರಾಜ್ಯ ಸರ್ಕಾರದ ವತಿಯಿಂದ ನೀಡುತ್ತಿರುವ ಮೂರು ಹಂತದ ಸರ್ವೋತ್ತಮ ಸೇವಾ ಪ್ರಶಸ್ತಿಗಳಲ್ಲಿ ಜಿಲ್ಲಾಮಟ್ಟದಲ್ಲಿ ಪ್ರತಿ ಜಿಲ್ಲೆಗೆ ನೀಡುತ್ತಿರುವ 6 ಪ್ರಶಸ್ತಿ ಸಂಖ್ಯೆಗಳ ಬದಲಿಗೆ 10 ಪ್ರಶಸ್ತಿಗೆ ಹೆಚ್ಚಿಸಿ, 2019-20ನೇ ಸಾಲಿನಿಂದಲೇ ನೀಡಲು ಸರ್ಕಾರವು ಆದೇಶಿಸಿದೆ. ಪ್ರತಿ ಪ್ರಶಸ್ತಿಗೆ ರೂ.10,000/-ಗಳನ್ನು ಪ್ರಶಸ್ತಿ ಮೊತ್ತವಾಗಿ ನೀಡುತ್ತಿದ್ದು, ಇದರಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

File No.DPARAR/104/AAR/2019-DPARAR_TRG-DPAR AR SEC



ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಹಿಂಬರಹ ಸಂಖ್ಯೆ:ಆಇ 237 ವೆಚ್ಚ-12/2019(ಇ-ಆಫೀಸ್), ದಿನಾಂಕ:05/11/2019ರಲ್ಲಿ ತನ್ನ ಸಹಮತಿಯನ್ನು ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

N. S. Gayathri Devi 07/12/2019
(ಎನ್.ಎಸ್. ಗಾಯತ್ರಿದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ - ತರಬೇತಿ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಪಿಎಸ್‌ಎ)/(ಇ & ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ರಿಜಿಸ್ಟ್ರಾರ್, ಮಾನ್ಯ ಕರ್ನಾಟಕ ಉಚ್ಛನ್ಯಾಯಾಲಯ, ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ವಿ.ವಿ.ಗೋಪುರ, ಬೆಂಗಳೂರು.
6. ಮಾನ್ಯ ಮುಖ್ಯಮಂತ್ರಿಗಳ ಅಪರ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12), ವಿಧಾನಸೌಧ, ಬೆಂಗಳೂರು.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
10. ಕಚೇರಿ ಪ್ರತಿ/ ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.